ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 25/10/20



ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣಾ ಪ್ರಚಾರ ಸಭೆಯಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ಮಾತನಾಡಿದರು.

# ಮೂರನೇ ಬಾರಿ ಮೋದಿ ಪ್ರಧಾನಿ ಬಿಎಸ್‌ವೈ ವಿಶ್ವಾಸ

ಸಂ.ಕ. ಸಮಾಚಾರ. ತುಮಕೂರು 25/10/20

ಮಲ್ಲಿಕಾರ್ಜುನಯ್ಯ ಅವರು ಪ್ರತಿನಿಧಿಸುತ್ತಿದ್ದ ಈ ಕ್ಷೇತ್ರ ಯಾವುದೇ ಕಾರಣಕ್ಕೂ ಬಿಜೆಪಿ ಕೈ ತಪ್ಪದಂತೆ ಕೆಲಸ ಮಾಡಬೇಕಿದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಲಹೆ ನೀಡಿದರು.

ನಗರದ ಸಿದ್ಧಿವಿನಾಯಕ ಸಭಾಂಗಣದಲ್ಲಿ ನಡೆದ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣಾ ಪ್ರಚಾರ ಸಭೆಯನ್ನು ಉದ್ಘಾಟಿಸಿ, ಬಿಜೆಪಿ ಕಾರ್ಯಕರ್ತರು ಮತದಾರರನ್ನು ಮತಗಟ್ಟೆಗೆ ಕರೆ ತಂದು ಮೊದಲ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಬೇಕು. ಕೇಂದ್ರ ಹಾಗೂ ರಾಜ್ಯದಲ್ಲಿರುವ ಬಿಜೆಪಿ ಸರ್ಕಾರ ಸಬ್ ಕಾ ಸಾಥ್ ಸಬ್ ವಿಕಾಸ್ ಘೋಷಣೆಯಂತೆ ಕಾರ್ಯನಿರ್ವಹಿಸುತ್ತಿದ್ದು, ಮೋದಿ ಅವರೆ ಮತ್ತೆ ಲೋಕಸಭಾ ಚುನಾವಣೆ ಎದುರಿಸಿ ಮೂರನೇ ಬಾರಿ ಪ್ರಧಾನಿಯಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದರು.

ಬಿಜೆಪಿ ಕಾರ್ಯಕರ್ತರೇ ಅಭ್ಯರ್ಥಿಗಳು ಎನ್ನುವಂತೆ ಕಾರ್ಯನಿರ್ವಹಿಸಬೇಕಿದೆ, ಶಿರಾ, ಆರ್.ಆರ್.ನಗರ ಹಾಗೂ ವಿಧಾನ ಪರಿಷತ್ ಸ್ಥಾನಗಳನ್ನು ಗೆಲ್ಲುತ್ತೇವೆ, ಗೆಲ್ಲುವ ಮೂಲಕ ತಿರುಗೇಟು ನೀಡಬೇಕು ಎಂದರು.

ಕೇಂದ್ರ ರಾಸಾಯನಿಕ ಗೊಬ್ಬರ ಖಾತೆ ಸಚಿವ ಡಿ.ವಿ.ಸದಾನಂದಗೌಡ, ಸಂಸದ ಜಿ.ಎಸ್.ಬಸವರಾಜು, ವಿಧಾನ ಪರಿಷತ್ ಸದಸ್ಯ ವೈ.ಎ.ನಾರಾಯಣ ಸ್ವಾಮಿ, ಮಾಜಿ ಸಚಿವರಾದ ಸೊಗಡು ಶಿವಣ್ಣ, ಸುನೀಲ್ ವಲ್ಲ್ಯಾಪುರೆ, ಶಾಸಕರಾದ ನಾಗೇಶ್, ಜ್ಯೋತಿ ಗಣೇಶ್, ಮಸಾಲೆ ಜಯರಾಂ, ನಾರಾಯಣಸ್ವಾಮಿ, ವಿಧಾನ ಪರಿಷತ್ ಮಾಜಿ ಸದಸ್ಯ ಹುಲಿನಾಯ್ಕರ್, ರೈತ ಮೋರ್ಚಾದ ಶಿವಪ್ರಸಾದ್, ನಂದೀಶ್, ಜಿ.ಪಂ.ಉಪಾಧ್ಯಕ್ಷ ಶಾರಾದ ನರಸಿಂಹಮೂರ್ತಿ ಇತರರಿದ್ದರು.